ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಮಸಾಸಂಇ : ಉ ನಿ : ಸುಮಪ : 2019–20 : ದಿನಾಂಕ: 21–11–2019

## ಪತ್ರಿಕಾ ಆಮಂತ್ರಣ

1. **ಪರಿಶಿಷ್ಟ ಜಾತಿ/ಪಂಗಡದ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಹೆಚ್ಚಿಸಲು ವರದಿ ನೀಡುವ ಕುರಿತು ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಮಾಲೋಚನಾ ಸಭೆ:**

**ಅಧ್ಯಕ್ಷತೆ:**

ಶ್ರೀ ಎಚ್. ಎನ್. ನಾಗಮೋಹನ ದಾಸ್,
ನಿವೃತ್ತ ನ್ಯಾಯಮೂರ್ತಿ,
ಕರ್ನಾಟಕ ಉಚ್ಛ ನ್ಯಾಯಾಲಯ.

ದಿನಾಂಕ: 22–11–2019, ಶುಕ್ರವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ.

ಸ್ಥಳ: ಸಭಾ ಕೊಠಡಿ, 2ನೇ ಮಹಡಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಟ್ಟಡ, ಯವನಿಕಾ, ನೃಪತುಂಗ ರಸ್ತೆ, ಬೆಂಗಳೂರು – 560 001.

### ಪತ್ರಿಕಾ ಪ್ರಕಟಣೆ

### ಉಪ ಲೋಕಾಯುಕ್ತರಾಗಿ ನ್ಯಾ : ಭೀಮನಗೌಡ ಸಂಗನಗೌಡ ಪಾಟೀಲ್ ಪ್ರಮಾಣ ವಚನ

ಬೆಂಗಳೂರು, ನವೆಂಬರ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ಉಪ ಲೋಕಾಯುಕ್ತರಾಗಿ ಕರ್ನಾಟಕ ಉಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶ ನ್ಯಾ: ಭೀಮನಗೌಡ ಸಂಗನಗೌಡ ಪಾಟೀಲ್ ಅವರು ಇಲ್ಲಿ ಇಂದು ಪ್ರಮಾಣ ವಚನ ಸ್ವೀಕರಿಸಿದರು.

ರಾಜಭವನದ ಔತಣ ಸಭಾಂಗಣದಲ್ಲಿ ನಡೆದ ವಿಶೇಷ ಸಮಾರಂಭದಲ್ಲಿ ರಾಜ್ಯಪಾಲ ವಜುಭಾಯಿ ವಾಲಾ ಅವರು ನ್ಯಾ: ಭೀಮನಗೌಡ ಸಂಗನಗೌಡ ಪಾಟೀಲ್ ಅವರಿಗೆ ಅಧಿಕಾರ ಪ್ರಮಾಣ ವಚನವನ್ನು ಬೋಧಿಸಿದರು.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಖಾತೆಗಳ ಹೊತ್ತ ಉಪ ಮುಖ್ಯಮಂತ್ರಿ ಗೋವಿಂದ ಎಂ ಕಾರಜೋಳ, ಕರ್ನಾಟಕ ಲೋಕಾಯುಕ್ತ ನ್ಯಾ : ಪಿ. ವಿಶ್ವನಾಥಶೆಟ್ಟಿ ಅವರೂ ಸೇರಿದಂತೆ ಹಲವು ಗಣ್ಯರು ಈ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಟಿ. ಎಂ. ವಿಜಯ್ ಭಾಸ್ಕರ್, ಮುಖ್ಯಮಂತ್ರಿಯವರ ಕಾರ್ಯದರ್ಶಿ ಎಸ್. ಸೆಲ್ವಕುಮಾರ್ ಅವರೂ ಸೇರಿದಂತೆ ಹಿರಿಯ ಅಧಿಕಾರಿಗಳು ಹಾಜರಿದ್ದರು.

**********

ಡಿ ಪಿ ಎಂ

## 2019–20ನೇ ಸಾಲಿನ ಲಲಿತಕಲಾ ಅಕಾಡೆಮಿಯ ಪುಸ್ತಕ ಬಹುಮಾನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು,  ನವೆಂಬರ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ಪ್ರತಿವರ್ಷದಂತೆ 2019ನೇ ಸಾಲಿನ ಪುಸ್ತಕ ಬಹುಮಾನ ಯೋಜನೆಗಾಗಿ ಈ ಕೆಳಕಂಡ ಪ್ರಕಾರಗಳ ಚಿತ್ರಕಲೆಗೆ ಸಂಬಂಧಿಸಿದ ಕನ್ನಡ ಪುಸ್ತಕಗಳನ್ನು ಆಹ್ವಾನಿಸಿದೆ.  ಪ್ರತಿ ಪ್ರಕಾರಗಳಲ್ಲಿ ತೀರ್ಪುಗಾರರು ಆಯ್ಕೆ ಮಾಡುವ ಒಂದು ಪುಸ್ತಕಕ್ಕೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಪುಸ್ತಕಳು 2018ರ ಜನವರಿ 1 ರಿಂದ ಡಿಸೆಂಬರ್ 31 ರೊಳಗೆ ಪ್ರಥಮ ಆವೃತಿಯಾಗಿ ಪ್ರಕಟವಾಗಿರುವ ಪುಸ್ತಕಗಳಾಗಿರಬೇಕು.  ಪುಸ್ತಕದ ತಾಂತ್ರಿಕ ಪುಟದಲ್ಲಿ ಪ್ರಥಮ ಮುದ್ರಣ 2018 ಎಂದು ಮುದ್ರಿತವಾಗಿರಬೇಕು.

**2019 ನೇ ಸಾಲಿನ ಅತ್ಯುತ್ತಮ ಪುಸ್ತಕಕ್ಕೆ ಬಹುಮಾನ:**

1. ಪುಸ್ತಕ ಬಹುಮಾನದ ಮೊತ್ತ ರೂ. 25,000/–

2. ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕವು ಪುನರ್ ಮುದ್ರಣವಾಗಿರಬಾರದು.  ಮೊದಲ ಆವೃತ್ತಿಯಲ್ಲಿ ಪ್ರಕಟಗೊಂಡಿರಬೇಕು.

3. ಪುಸ್ತಕ ಬಹುಮಾನಕ್ಕೆ ಕಳಹಿಸುವ ಪುಸ್ಕಗಳು ಯಾವುದೇ ತರಗತಿಗಳಿಗೆ ಹಾಗೂ ವಿಶ್ವವಿದ್ಯಾಲಯದ ಪಠ್ಯಪುಸ್ತಕವಾಗಿರಬಾರದು.

4. ಪುಸ್ತಕವು ಲೇಖಕರ ಸ್ವಂತ ರಚನೆಯಾಗಿರಬೇಕು. ಸಂಪಾದಿತ ಕೃತಿಯಾಗಿರಬಾರದು. ಹಾಗೂ ಪುಸ್ತಕವನ್ನು ಡಿಸೆಂಬರ್ 15 ಒಳಗಾಗಿ ಅಕಾಡೆಮಿಗೆ ತಲುಪಿಸಬೇಕು.

5. ಪುಸ್ತಕ ಬಹುಮಾನಕ್ಕೆ ಆಯ್ಕೆಯಾದ ಪುಸ್ತಕದ ಲೇಖಕರಿಗೆ ಈ ಬಹುಮಾನ ನೀಡಲಾಗುವುದು.

6. ಬಹುಮಾನಕ್ಕೆ ಪರಿಗಣಿಸಲು ಕನಿಷ್ಠ ಮೂರು ಜನ ಲೇಖಕರು ಸ್ಪರ್ಧೆಯಲ್ಲಿ ಭಾಗವಹಿಸಬೇಕು.

7. ಒಂದೇ ಪ್ರಕಾರದಲ್ಲಿ ಎರಡು ಬಾರಿ ಪುಸ್ತಕ ಬಹುಮಾನ ಪಡೆದವರ ಪುಸ್ತಕಗಳನ್ನು ಅದೇ ಪ್ರಕಾರಗಳಲ್ಲಿ ಮತ್ತೆ ಬಹುಮಾನಕ್ಕೆ ಪರಿಗಣಿಸಲಾಗುವುದಿಲ್ಲ.

8. ವಿವಿಧ ಸರ್ಕಾರಿ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಪುಸ್ತಕ ಪ್ರಾಧಿಕಾರ, ಇತರೆ ಎಲ್ಲಾ ಅಕಡೆಮಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇನ್ನೂ ಮುಂತಾದ ಅನುದಾನ ಸಂಸ್ಥೆಗಳಿಂದ ಅನುದಾನ ಪಡೆದು ತಾವೇ ಪ್ರಕಟಿಸಿದ ಅಥವಾ ಅಂತಹ ಸಂಸ್ಥೆಗಳಿಂದ ಬರೆಸಿ ಪ್ರಕಟಿಸಿದ ಕೃತಿಗಳನ್ನು ಪ್ರಶಸ್ತಿಗೆ ಪರಿಗಣಿಸುವುದಿಲ್ಲ.

9._ಲಲಿತಕಲೆಗೆ ಸಂಬಂಧಪಟ್ಟ ಸಾಂಪ್ರದಾಯಕ, ಸಮಕಾಲೀನ, ಚಿತ್ರ ಶಿಲ್ಪಕಲೆ,ಗ್ರಾಫಿಕ್ಸ್ ಯಾವುದೇ ಪ್ರಕಾರದ ಲಲಿತಕಲೆಗೆ ಸಂಬಂಧಪಟ್ಟದ್ದಾಗಿರಬೇಕು.

10. ಶೈಕ್ಷಣಿಕ ಅಧ್ಯಾಯನಕ್ಕಾಗಿ ಪಿಹೆಚ್.ಡಿ, ಡಿ.ಲಿಟ್, ಪ್ರಬಂಧ ಅಥವಾ ಅಧ್ಯಯನಕ್ಕಾಗಿ ಮಾಡಿದಂತಹ ಪುಸ್ತಕಗಳನ್ನು ಪರಿಗಣಿಸುವುದಿಲ್ಲ.

11. ಕೃತಿ:ಪುಸ್ತಕವು ಕನಿಷ್ಠ 100 ಪುಟಗಳಿಗೂ ಹೆಚ್ಚಿನ ಪುಟಗಳನ್ನು ಹೊಂದಿರತಕ್ಕದ್ದು.

12.ಒಬ್ಬ ಲೇಖಕರು ಪುಸ್ತಕ ಬಹುಮಾನಕ್ಕೆ ಆಯ್ಕೆಯಾಗಿ ಬಹುಮಾನ ಪಡೆದ ನಂತರ ಆ ಲೇಖಕರು ಮತ್ತೆ 2 ವರ್ಷಗಳವರೆಗೆ ಅಕಾಡೆಮಿಯಿಂದ ಬಹುಮಾನ ಪಡೆಯಬಾರದು.

13. ಪುಸ್ತಕ ಬಹುಮಾನಕ್ಕೆ ಅರ್ಜಿ ಸಲ್ಲಿಸುವ ಲೇಖಕರು ತಾವು ಕಳುಹಿಸುವ ಪುಸ್ತಕದ 4 ಪ್ರತಿಗಳನ್ನು ಉಚಿತವಾಗಿ ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಕಡ್ಡಾಯವಾಗಿ ನೀಡಬೇಕು. ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸುವುದಿಲ್ಲ.

**14. ಕನ್ನಡ ಭಾಷೆಯ ಪುಸ್ತಕಗಳನ್ನು ಮಾತ್ರ ಪರಿಗಣಿಸಲಾಗುವುದು.**

**15. ತೀರ್ಪುಗಾರರು ಆಯ್ಕೆಮಾಡಿದ ಒಂದು ಪುಸ್ತಕಕ್ಕೆ ಬಹುಮಾನ ನೀಡಲಾಗುವುದು.**

**16. ಅಕಾಡೆಮಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಸ್ವೀಕೃತವಾದ ಪುಸ್ತಕಗಳನ್ನು 3 ಮಂದಿ ವಿಷಯ ತಜ್ಞಗೆ ಕಲುಹಿಸಿಕೊಟ್ಟು ಅವರು ಶಿಫಾರಸ್ಸು ಮಾಡಿದ ಪುಸ್ತಕಗಳನ್ನು ಅಕಾಡೆಮಿಯ ಸಭೆಯಲ್ಲಿ ಮಂಡಿಸಿ ಅಂತಿಮ ತೀರ್ಮಾನ ತೆಗೆದುಕೊಳ್ಳಲಾಗುತ್ತದೆ. ಅಕಾಡೆಮಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.**

**17. ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕಗಳು 15–12–2019 ರ ಒಳಗಾಗಿ (ಸರ್ಕಾರಿ ರಜಾದಿನಗಳನ್ನು ಹೊರತುಪಡಿಸಿ) ಖುದ್ದಾಗಿ ಅಥವಾ ಅಂಚೆ ಮೂಲಕ ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಸಲ್ಲಿಸಬಹುದಾಗಿದೆ.**

**ಈ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002, ಇವರಿಗೆ ಕಳುಹಿಸಿಕೊಡಬೇಕು ಹಾಗೂ ಪುಸ್ತಕದ ಮೇಲೆ ಮತ್ತು ಪುಸ್ತಕದ ಶೀರ್ಷಿಕೆ ಪುಟದಲ್ಲಿ ಯಾವ ಚಿತ್ರಕಲಾ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ನಮೂದಿಸಬೇಕು ಎಂದು ಕರ್ನಾಕ ಲಲಿತಕಲಾ ಅಕಾಡೆಮಿ ಪ್ರಕಟಣೆ ತಿಳಿಸಿದೆ.**

## Bye Elections to the Council of States from Karnataka and Uttar Pradesh

Bengaluru, November 21st (Karnataka Information)

**There are two casual vacancies in the Council of State one each from Karnataka and Uttar Pradesh on resignation of K.C. Ramamurthy, Karnataka and Dr. Tazeen Fatma, Utter Pradesh.**

**The Commission has decided to hold by-elections to the Council of States from Karnataka and Uttar Pradesh to fill up the above said vacancies in accordance with following schedule:**

**Issue of Notification - 25th November 2019 (Monday), Last Date of making nominations - 2nd November 2019 (Monday), Scrutiny of Nominations - 3rd December 2019 (Tuesday), Last date for withdrawal of candidature - 5th December, 2019 (Thursday), Date of Poll - 12th December, 2019 (Thursday),**

**Counting of Votes - 12th December, 2019 (Thursday) at 5.00 PM. Date before which election shall be completed 16th December, 2019 (Monday).**

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 21 (ಕರ್ನಾಟಕ ವಾರ್ತೆ)

ವಸತಿ, ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಹಾಗೂ ಮೈಸೂರು ಮತ್ತು ಕೊಡಗು ಜಿಲ್ಲೆಯ ಉಸ್ತುವಾರಿ ಸಚಿವರೂ ಆದ ಶ್ರೀ ವಿ. ಸೋಮಣ್ಣ ಅವರು ನವೆಂಬರ್ 23 ರಂದು ರಾಮನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು, ಅದೇ ದಿನ ನಗರಕ್ಕೆ ಹಿಂದಿರುಗಲಿದ್ದಾರೆ.

## ಸಚಿವರ ಪ್ರವಾಸ

ಬೆಂಗಳೂರು, ನವೆಂಬರ್ 21 (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್ ಅವರು ನವೆಂಬರ್ 23 ರಂದು ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.